ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 19/3/21

## ತಮಿಳುನಾಡು ನದಿ ಜೋಡಣೆ ವಿರುದ್ಧ ಶೀಘ್ರ ಸುಪ್ರೀಂಗೆ ದೂರು: ಬೊಮ್ಮಾಯಿ

**ವಿಧಾನ ಪರಿಷತ್:** ತಮಿಳುನಾಡು ಸರ್ಕಾರ ಕಾನೂನು ಬಾಹಿರವಾಗಿ ಕೈಗೊಳ್ಳುತ್ತಿರುವ ಕಾವೇರಿ-ದಕ್ಷಿಣ ವೆಲ್ಲಾರ್ ನದಿ ಜೋಡಣೆ ಯೋಜನೆ ವಿರುದ್ಧ ಶೀಘ್ರದಲ್ಲೇ ಸುಪ್ರೀಂ ಕೋರ್ಟ್‌ನಲ್ಲಿ ಮೊಕದ್ದಮೆ ದಾಖಲಿಸಲಾಗುವುದು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಎಂ. ನಾರಾಯಣ ಸ್ವಾಮಿ ಪ್ರಶ್ನೆಗೆ ಸಿಎಂ ಪರವಾಗಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಉತ್ತರಿಸಿದ ಬಳಿಕ ಮಾತನಾಡಿದ ಬಸವರಾಜ ಬೊಮ್ಮಾಯಿ ಅವರು, ಈಗಾಗಲೇ ತಮಿಳುನಾಡಿನ ಈ ಯೋಜನೆ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ಮೊಕದ್ದಮೆ ದಾಖಲಿಸಲು ಕಾನೂನು ತಜ್ಞರ ಸಭೆ ನಡೆಸಿ ತೀರ್ಮಾನಿಸಿದ್ದು, ಶೀಘ್ರವೇ ಒರಿಜಿನಲ್ ಸೂಟ್ ಫೈಲ್ ಮಾಡಲಾಗುವುದು. ಜತೆಗೆ ಮದುರೈ ಹೈಕೋರ್ಟ್‌ನಲ್ಲೂ ಅಲ್ಲಿನ ರೈತರು ಪ್ರಕರಣ ದಾಖಲಿಸಿದ್ದು, ರಾಜ್ಯ ಸರ್ಕಾರದಿಂದ ಆಕ್ಷೇಪಣೆ ಸಲ್ಲಿಸಲಾಗುವುದು ಎಂದರು.